ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ತುಮಕೂರು-ಹೊನ್ನಾವರ ರಸ್ತೆಗಳಿಗೆ ಆಯವ್ಯಯದಲ್ಲಿ ಕಾದಿರಿಸಿದ ಹಣದ ವಿವರಗಳು ಈ ಕೆಳಕಂಡಂತೆ ಇರುತ್ತದೆ:-

ವರ್ಷ	ಆಯವ್ಯಯದಲ್ಲಿ ಕಾದಿರಿಸಿದ ಹಣ ಲಕ್ಷ ರೂ.ಗಳಲ್ಲಿ	ಖರ್ಚಾದ ಹಣ	ಉಳಿದ ಹಣ
1995-96	90.00	19.85	70.15
1996-97	121.90	96.34	23.66
1997-98	100.83	27.68	73.15

ಆ) ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಶಿರಾ-ಮುಳಾಬಾಗಿಲು ರಸ್ತೆ ಅಭಿವೃದ್ಧಿ

2884:(3916)

ಶ್ರೀ ವಿ.ಮುನಿಯಪ್ಪ (ಶಿಡ್ಲಘಟ್ಟ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇಂದ್ರ ಭೂ ಸಾರಿಗೆ ಇಲಾಖೆಯು ಶಿರಾದಿಂದ ಮುಳಬಾಗಿಲು (ಗೌರಿಬಿದನೂರು, ಚಿಕ್ಕಬಳ್ಳಾಪುರ, ಶಿಡ್ಲಘಟ್ಟ ಹಾಗೂ ಚಿಂತಾಮಣಿ ಮಾರ್ಗವಾಗಿ)ವರೆಗೆ ರಸ್ತೆ ಅಭಿವೃದ್ಧಿಗೆ ಹಣ ಮಂಜೂರು ಮಾಡಲಾಗಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಹಣ ಮಂಜೂರಾಗಿದೆ ಮತ್ತು ಮಂಜೂರಾದ ದಿನ ಯಾವುದು?

ಇ) ಈ ಕಾಮಗಾರಿಯ ಪ್ರಗತಿಯು ಯಾವ ಹಂತದಲ್ಲಿದೆ?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಶಿರಾದಿಂದ-ಮುಳಬಾಗಿಲು ರಸ್ತೆಯ ಆಯ್ದ ಭಾಗಗಳನ್ನು ಅಭಿವೃದ್ಧಿಪಡಿಸಲು ಕೇಂದ್ರ ಭೂ ಸಾರಿಗೆ ಇಲಾಖೆಯು ಅಂತರರಾಜ್ಯ ಪ್ರಾಮುಖ್ಯತೆ ಯೋಜನೆಯಡಿ ಹಣ ಮಂಜೂರು ಮಾಡಿರುತ್ತದೆ.

ಆ) ರೂ. 1,98,40,000-00 ಗಳಿಗೆ ದಿನಾಂಕ: 18-3-97ರಂದು ಮಂಜೂರಾಗಿದೆ.

ಇ) 10 ಕಿ.ಮೀ. ಗಳಷ್ಟು ಡಬ್ಲ್ಯು.ಬಿ.ಎಂ ಮತ್ತು ಮಿಕ್ಸ್ ಸೀಲ್ ಕೆಲಸವು ಮುಗಿದು ಉಳಿದ ಅಭಿವೃದ್ಧಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಕೊಡಗು ಜಿಲ್ಲೆಯಲ್ಲಿ ರಸ್ತೆ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಹಣ

2885:(3691)

ಶ್ರೀ ಡಿ.ಎನ್.ಮಾದಪ್ಪ (ಮಡಕೇರಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಸೇರಿದ ರಸ್ತೆಯ ವಿಸ್ತೀರ್ಣವೆಷ್ಟು?

ಆ) ಕಳೆದ ಮೂರು ವರ್ಷಗಳಿಂದ ಈ ರಸ್ತೆಯ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು? ಹಳೆಯ ರಸ್ತೆ ದುರಸ್ತಿಗೆ ಕಿಮಿ 1ಕ್ಕೆ ಬಿಡುಗಡೆ ಮಾಡುವ ಹಣವೆಷ್ಟು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಕೊಡಗು ಜಿಲ್ಲೆ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ರಾಜ್ಯ ಹೆದ್ದಾರಿ 310.8 ಕಿಮಿ ಮತ್ತು ಜಿಲ್ಲಾ ಮುಖ್ಯ ರಸ್ತೆ 804 ರೂ. ಒಟ್ಟು 1114.8 ಕಿಮಿ ಉದ್ದ ರಸ್ತೆ ಬರುತ್ತದೆ.

ಆ) ಕಳೆದ ಮೂರು ವರ್ಷಗಳಿಂದ ಈ ರಸ್ತೆಯ ಅಭಿವೃದ್ಧಿಗೆ ಯೋಜನೆ. ಯೋಜನೇತರ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಗಿನಂತಿದೆ.